# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 596 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ ಸಿಂಹ ನಾಯಕ್ ಕೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೂ ಮತ್ತು ಸಾಕ್ಸ್ ಖರೀದಿಗೆ ಪ್ರಸ್ತುತ ನಿಗದಿಪಡಿಸಿರುವ ಮೊತ್ತ ಅತ್ಯಂತ ಕಡಿಮೆ ಇದ್ದು, ಪ್ರಸ್ತುತ ದಿನಮಾನದಲ್ಲಿ ಈ ಹಣದಲ್ಲಿ ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿ ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ.<br>ವಿದ್ಯಾವಿಕಾಸ ಯೋಜನೆಯಡಿ ಸರ್ಕಾರಿ ಶಾಲಾ ಮಕ್ಕಳಿಗೆ ಶೈಕ್ಷಣಿಕ ವರ್ಷದಲ್ಲಿ ಒಂದು ಜೊತೆ ಶೂ(ಪಾದರಕ್ಷೆ) ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ಉಚಿತವಾಗಿ ಒದಗಿಸಲಾಗುತ್ತಿದೆ.<br>2024-25ನೇ ಸಾಲಿಗೆ ಸರ್ಕಾರಿ ಶಾಲೆಗಳ 1ನೇ ತರಗತಿಯಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ಒದಗಿಸಲು ಸರ್ಕಾರಿ ಆದೇಶ ಸಂಖ್ಯೆ: ಇಪಿ 54 ಎಂಪಿಇ 2024, ಬೆಂಗಳೂರು, ದಿನಾಂಕ:28.05.2024ರಲ್ಲಿ ರೂ.121.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು, ಕೆಳಕಂಡಂತೆ ಶೂ ಮತ್ತು ಸಾಕ್ಸ್‌ಗಳ ದರಗಳನ್ನು ನಿಗದಿಪಡಿಸಲಾಗಿದೆ.<br>**ಶೂ ಮತ್ತು ಸಾಕ್ಸ್‌ಗಳ ದರಗಳು**<br>1) 1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ : ತಲಾ ರೂ.265/-<br>2) 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ : ತಲಾ ರೂ.295/-<br>3) 9 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ : ತಲಾ ರೂ.325/-<br>ಆದಾಗ್ಯೂ, ಸೇವಾ ದೃಷ್ಟಿಯಿಂದ ದಾನಿಗಳು, ಖಾಸಗಿ ಸಂಸ್ಥೆಗಳು ಈ ಉದ್ದೇಶಕ್ಕಾಗಿ ಹೆಚ್ಚುವರಿ ಹಣ ನೀಡಿದ್ದಲ್ಲಿ, ಇದನ್ನೂ ಬಳಸಿಕೊಂಡು ಇನ್ನೂ ಉತ್ತಮ ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿಸಿ ವಿತರಿಸಲು ಅವಕಾಶ ಕಲ್ಪಿಸಲಾಗಿದೆ.<br>ಶೂ ಮತ್ತು ಸಾಕ್ಸ್‌ಗಳನ್ನು ರಾಷ್ಟ್ರಮಟ್ಟದ ಹೆಸರಾಂತ ಕಂಪನಿಗಳ ಪ್ರತಿಷ್ಠಿತ ಬ್ರ್ಯಾಂಡ್‌ಗಳನ್ನು ಅಧಿಕೃತ ಮಾರಾಟಗಾರರಿಂದ ISO CERTIFIED ಶೂ ಮತ್ತು ಸಾಕ್ಸ್ ಅಥವಾ ಪಾದರಕ್ಷೆಗಳನ್ನು ಖರೀದಿಸತಕ್ಕದ್ದು ಎಂದು ಆದೇಶಿಸಲಾಗಿದೆ.<br>ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿಯವರ ಮೇಲ್ವಿಚಾರಣೆಯಲ್ಲಿ ಪ್ರತಿಯೊಂದು ತಾಲ್ಲೂಕಿನಲ್ಲಿ ಕನಿಷ್ಟ ಶೇ.5ರಷ್ಟು ಶಾಲೆಗಳಲ್ಲಿನ ಶೂ ಮತ್ತು ಸಾಕ್ಸ್ ಗುಣಮಟ್ಟವನ್ನು ಯಾದೃಚ್ಛಿಕವಾಗಿ ಪರೀಕ್ಷಿಸಲು ಒಂದು ಸಮಿತಿ ರಚಿಸಲು ಆದೇಶಿಸಿದೆ.<br>ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿಪಿಇ(1)/ಮು.ಯೋ.ಅನು.ಶೂ ಮತ್ತು ಸಾಕ್ಸ್ 06/2024-25, ದಿನಾಂಕ:29.05.2024ರಲ್ಲಿ ನಿರ್ದಿಷ್ಟತೆಗನುಗುಣವಾಗಿ (Specification) ಉತ್ತಮ ಗುಣಮಟ್ಟದ ಶೂ-ಸಾಕ್ಸ್‌ಗಳನ್ನು ಶಾಲಾಭಿವೃದ್ಧಿ ಸಮಿತಿ ಖರೀದಿಸಿ ನೀಡಲು ಮತ್ತು ಯಾವುದೇ ಕಾರಣಕ್ಕೂ ಕಳಪೆ ಗುಣಮಟ್ಟದ ಶೂ-ಸಾಕ್ಸ್‌ಗಳನ್ನು ನೀಡದಿರಲು ಸೂಚಿಸಲಾಗಿದೆ. |
| ಆ) | ಬಂದಿದ್ದಲ್ಲಿ, ಪ್ರಸ್ತುತ ಮಾರುಕಟ್ಟೆ ದರವನ್ನು ಅವಲೋಕಿಸಿ, ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿ ಮಾಡಲು ನೈಜವಾಗಿ ಬೇಕಾದ ಮೊತ್ತವನ್ನು ನಿಗದಿಪಡಿಸಲು ಸರ್ಕಾರ ಇದುವರೆಗೆ ಸೂಕ್ತ ಕ್ರಮ ವಹಿಸದಿರಲು ಕಾರಣಗಳೇನು; | |

| | | |
|---|---|---|
| | | ಸರ್ಕಾರವು ನಿಗದಿಪಡಿಸಿರುವ ಶೂ-ಸಾಕ್ಸ್‌ಗಳ ದರಗಳಿಗೆ ಮಾರುಕಟ್ಟೆಯಲ್ಲಿ ಉತ್ತಮ ಗುಣಮಟ್ಟದ ಶೂ-ಸಾಕ್ಸ್‌ಗಳನ್ನು ಸಗಟು ಖರೀದಿಗೆ ಅವಕಾಶವಿದ್ದು, ಶೂ-ಸಾಕ್ಸ್‌ಗಳ ದರ ಪರಿಷ್ಕರಣೆ ಬಗ್ಗೆ ಯಾವುದೇ ಮನವಿಗಳು ಸ್ವೀಕೃತವಾಗಿರುವುದಿಲ್ಲ. |
| ಇ) | ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೂ ಮತ್ತು ಸಾಕ್ಸ್ ಖರೀದಿಗೆ ನಿಗದಿಪಡಿಸಿರುವ ಅನುದಾನವನ್ನು ಪ್ರಸ್ತುತ ಮಾರುಕಟ್ಟೆ ದರವನ್ನು ಗಮನದಲ್ಲಿಟ್ಟುಕೊಂಡು ಗಣನೀಯವಾಗಿ ಹೆಚ್ಚಿಸಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ? | ಸದ್ಯಕ್ಕೆ ಈ ರೀತಿಯ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಇಪಿ: 75 ಎಂಪಿಇ 2024

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು